# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 618 |
| ಸದಸ್ಯರ ಹೆಸರು | : | ಶ್ರೀ ಟಿ.ಎ. ಶರವಣ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14.08.2025 |
| ಉತ್ತರಿಸಬೇಕಾದ ಸಚಿವರು | : | ಉಪ ಮುಖ್ಯಮಂತ್ರಿಯವರು |

*******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಹೊರ ವಲಯದಲ್ಲಿ ಉದ್ದೇಶಿತ ಪಿ.ಆರ್.ಆರ್. ರಸ್ತೆಯನ್ನು ನಿರ್ಮಾಣ ಮಾಡಲು ಸರ್ಕಾರ ಎಷ್ಟು ಎಕರೆ ಜಮೀನು ಬೇಕಾಗುತ್ತದೆ; ಎಷ್ಟು ಹಳ್ಳಿಗಳಲ್ಲಿ ರಸ್ತೆ ಹಾದು ಹೋಗುತ್ತದೆ; | ಉದ್ದೇಶಿತ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪಿ.ಆರ್.ಆರ್.ಭಾಗ-1) ರಸ್ತೆಯ ನಿರ್ಮಾಣ ಮಾಡಲು ಅಂದಾಜು 2557 ಎಕರೆಗಳ ಜಮೀನು ಅವಶ್ಯಕತೆ ಇರುತ್ತದೆ. ಸದರಿ ರಸ್ತೆಯು ಒಟ್ಟು 77 ಗ್ರಾಮಗಳಲ್ಲಿ ಹಾದು ಹೋಗುತ್ತದೆ. |
| ಆ) | ಭೂಸ್ವಾಧೀನ ಪ್ರಕ್ರಿಯೆ ಯಾವಾಗಿನಿಂದ ಪ್ರಾರಂಭವಾಗಿದೆ; ಸಂತ್ರಸ್ಥರಿಗೆ ಪರಿಹಾರವನ್ನು ಯಾವ ಮಾನದಂಡಗಳ ಆಧಾರದ ಮೇಲೆ ನಿಗದಿಪಡಿಸಿದೆ; | • ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪಿ.ಆರ್.ಆರ್. ಭಾಗ-1) ಯೋಜನೆಗೆ ಭೂಸ್ವಾಧೀನ ಪ್ರಕ್ರಿಯೆ ದಿನಾಂಕ:23.09.2005 ರಿಂದ ಪ್ರಾರಂಭವಾಗಿರುತ್ತದೆ.<br>• ಭೂಸ್ವಾಧೀನಪಡಿಸಿಕೊಳ್ಳುವ ಜಮೀನಿನ ಭೂಮಾಲೀಕರಿಗೆ ಆಯಾ ಗ್ರಾಮವಾರು ಮಾರ್ಗಸೂಚಿ ದರವನ್ನು ಗಮನದಲ್ಲಿರಿಸಿಕೊಂಡು ಸಂಧಾನ ಸೂತ್ರದ (ಸಂಧಾನಿತ ಮೊತ್ತ) ಮೂಲಕ ಭೂಸ್ವಾಧೀನ ಕಾಯ್ದೆ 1894ರಡಿ ನಿಗಧಿಪಡಿಸಬಹುದಾದ ಭೂಪರಿಹಾರ ಮೊತ್ತಕ್ಕಿಂತ ಹೆಚ್ಚಿನ ಭೂಪರಿಹಾರ ನಿಗದಿಪಡಿಸಲು ಅಥವಾ ಭೂಮಾಲೀಕರು ಒಪ್ಪಿದಲ್ಲಿ ಟಿ.ಡಿ.ಆರ್ ನೀಡಲು ಕ್ರಮಕೈಗೊಳ್ಳಲಾಗುತ್ತಿದೆ. |
| ಇ) | ಸಂತ್ರಸ್ಥರಿಗೆ ಭೂ ಪರಿಹಾರ ನೀಡುವಾಗ 1894 ಕಾಯ್ದೆಯಡಿ ಭೂ ಪರಿಹಾರ ನೀಡಲು ಉದ್ದೇಶಿಸಲಾಗಿದೆಯೇ; ಸಂತ್ರಸ್ಥರಿಗೆ ಇದರಿಂದ ಆಗುವ ಸಾಧಕ-ಬಾಧಕಗಳೇನು; | ಇಲ್ಲ.<br>ಭೂಸ್ವಾಧೀನಪಡಿಸಿಕೊಳ್ಳುವ ಭೂ ಮಾಲೀಕರಿಗೆ ಭೂಸ್ವಾಧೀನ ಕಾಯ್ದೆ 1894ರಡಿ ನಿಗದಿಪಡಿಸಬಹುದಾದ ಭೂಪರಿಹಾರ ಮೊತ್ತಕ್ಕಿಂತ ಹೆಚ್ಚಿನ ಭೂಪರಿಹಾರ ನಿಗದಿಪಡಿಸಲು ಅಥವಾ ಭೂಮಾಲೀಕರು ಒಪ್ಪಿದಲ್ಲಿ ಟಿ.ಡಿ.ಆರ್ ನೀಡಲು ಕ್ರಮವಹಿಸಲಾಗುವುದರಿಂದ ಯಾವುದೇ ಬಾಧಕ ಉಂಟಾಗುವುದಿಲ್ಲ. |
| ಈ) | ಸಂತ್ರಸ್ಥರಿಗೆ 2013ರ ಭೂ ಸ್ವಾಧೀನ ಕಾಯ್ದೆಯಡಿ ಪರಿಹಾರ ನೀಡದಿರಲು ಕಾರಣಗಳೇನು? | ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ನಂ.7661-7663/2018ರ ಪ್ರಕರಣದಲ್ಲಿ ದಿನಾಂಕ: 20.01.2022ರಂದು ನೀಡಿರುವ ಆದೇಶದನ್ವಯ ಬಿಡಿಎ ಕಾಯ್ದೆ 1976ರಡಿ ಅಧಿಸೂಚಿತ ಜಮೀನುಗಳಿಗೆ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರದ ಹಕ್ಕು, ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಕಾಯ್ದೆ 2013 ಅನ್ವಯವಾಗುವುದಿಲ್ಲ. ಆದ್ದರಿಂದ, ಸದರಿ ಕಾಯ್ದೆಯಡಿ ಭೂ ಪರಿಹಾರ ನೀಡುತ್ತಿಲ್ಲ. |

**ಸಂಖ್ಯೆ**: ನಅಇ 529 ಬೆಂಭೂಸ್ವಾ 2025

**(ಡಿ.ಕೆ ಶಿವಕುಮಾರ್)**
ಉಪ ಮುಖ್ಯಮಂತ್ರಿ